ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 3–12–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಸೂರ್ಯಮಿತ್ರ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮ ಉದ್ಘಾಟನಾ ಸಮಾರಂಭ:<br><br>ಮುಖ್ಯ ಅತಿಥಿಗಳು:<br><br>ಪುನಟಿ ಶ್ರೀಧರ್,<br>ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಹಾಗೂ ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ.<br><br>ಶ್ರೀಮತಿ ಲತಾಕೃಷ್ಣ ರಾವ್,<br>ಅಪರ ಪ್ರಧಾನ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು,<br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ<br><br>ಸುಭಾಸ್‌ಚಂದ್ರ<br>ಪ್ರಧಾನ ಕಾರ್ಯದರ್ಶಿಗಳು,<br>ಗ್ರಾಮಿಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ<br><br>ಸಂಪರ್ಕ<br>ದೂರವಾಣಿ ಸಂಖ್ಯೆ: 23626493 | 04–12–2015<br>ಶುಕ್ರವಾರ<br>ಬೆಳಿಗ್ಗೆ<br>10–00 ಗಂಟೆಗೆ | ಮಹಾತ್ಮಾಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಶ್ರೀರಾಂಪುರ ಕ್ರಾಸ್, ಜಕ್ಕೂರು, ಬೆಂಗಳೂರು. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ವಿಧಾನ ಪರಿಷತ್‍ನ 25 ಸ್ಥಾನಗಳಿಗೆ ಡಿಸೆಂಬರ್ 27 ರಂದು ಚುನಾವಣೆ

ಬೆಂಗಳೂರು, ಡಿಸೆಂಬರ್ 3 (ಕರ್ನಾಟಕ ವಾರ್ತೆ)

ಸ್ಥಳೀಯ ಸಂಸ್ಥೆಗಳ ಮತ ಕ್ಷೇತ್ರಗಳಿಂದ ವಿಧಾನ ಪರಿಷತ್‍ನ 25 ಸ್ಥಾನಗಳಿಗೆ ಡಿಸೆಂಬರ್ 27, 2015 ರಂದು ಚುನಾವಣೆ ನಡೆಯಲಿದೆ ಎಂದು ಮುಖ್ಯ ಚುನಾವಣಾ ಆಯುಕ್ತ ಅನಿಲ್ ಕುಮಾರ್ ಝಾ ಅವರು ತಿಳಿಸಿದರು.

ಅವರು ಇಂದು ಸುದ್ದಿಗಾರರೊಂದಿಗೆ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡುತ್ತಾ ಈ ಸಂಬಂಧ ನಿನ್ನೆ ಡಿಸೆಂಬರ್ 2 ರಂದು ಅಧಿಸೂಚನೆ ಹೊರಡಿಸಲಾಗಿದ್ದು ಡಿಸೆಂಬರ್ 9 ರಂದು ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿರುತ್ತದೆ ಎಂದು ತಿಳಿಸಿದರು. ಮುಂದುವರೆದು ಡಿಸೆಂಬರ್ 10 ರಂದು ನಾಮಪತ್ರ ಪರಿಶೀಲನೆ, ಡಿಸೆಂಬರ್ 12 ನಾಮಪತ್ರ ವಾಪಸಾತಿಗೆ ಕೊನೆಯ ದಿನವಾಗಿರುತ್ತದೆ ಎಂದು ತಿಳಿಸಿದ ಅವರು ಡಿಸೆಂಬರ್ 27 ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 4-00 ಗಂಟೆಯವರೆಗೆ ಮತದಾನ ನಡೆಯಲಿದ್ದು ಡಿಸೆಂಬರ್ 30 ರಂದು ಮತ ಎಣಿಕೆ ನಡೆಯಲಿದ್ದು ಜನವರಿ 1, 2016 ಕ್ಕೆ ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ವಿವರಿಸಿದರು.

ಒಟ್ಟಾರೆ ರಾಜ್ಯದ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ, ಗ್ರಾಮ ಪಂಚಾಯತಿ, ಕಾರ್ಪೋರೇಷನ್, ಸಿ.ಎಂಸಿ, ಟಿ.ಎಂ.ಸಿ. ಪಟ್ಟಣ ಪಂಚಾಯತಿಗಳ ಒಟ್ಟು 6516 ಸ್ಥಳೀಯ ಸಂಸ್ಥೆಗಳ ಸದಸ್ಯತ್ವ ಹೊಂದಿರುವ 108454 ಮತದಾರರು ಈ ಚುನಾವಣೆಯಲ್ಲಿ ತಮ್ಮ ಮತ ಚಲಾಯಿಸಲಿದ್ದಾರೆ ಎಂದು ಅವರು ತಿಳಿಸಿದರು.

ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಚುನಾವಣಾಧಿಕಾರಿಗಳಾಗಿದ್ದು ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ನಡೆಯಲಿದೆ ಎಂದು ತಿಳಿಸಿದ ಅವರು, ಈ ಚುನಾವಣೆಯಲ್ಲಿ ಅಭ್ಯರ್ಥಿಗಳು ತಮ್ಮ ಖರ್ಚು ವೆಚ್ಚದ ಬಗ್ಗೆ ಯಾವುದೇ ಲೆಕ್ಕ ದಾಖಲೆಗಳನ್ನು ನೀಡಬೇಕಾಗಿಲ್ಲ ಎಂದು ತಿಳಿಸಿದರು. ಮತಪತ್ರದಲ್ಲಿ "ನೋಟಾ" ಆಯ್ಕೆಗೂ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಪಲ್ಲವಿ/ಮಮತ/ಕೆಎಂ

## ನಿಲಯಪಾಲಕರು ಹಾಗೂ ವಸತಿ ನಿಲಯ ಮೇಲ್ವಿಚಾರಕರ ಹುದ್ದೆಗಳ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಡಿಸೆಂಬರ್ 3 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗದ ಅಧಿಸೂಚನೆ ದಿನಾಂಕ: 25–9–2014 ರಲ್ಲಿ ಅಧಿಸೂಚಿಸಲಾದ ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಪದವಿ ಪೂರ್ವ ಕಾಲೇಜುಗಳಲ್ಲಿನ ನಿಲಯಪಾಲಕರು ಹಾಗೂ ವಸತಿ ನಿಲಯ ಮೇಲ್ವಿಚಾರಕರ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ಇಂದು ದಿನಾಂಕ: 3–12–2015 ರಂದು ಆಯೋಗದ ಅಂತರ್ಜಾಲ http://kpsc.kar.nic.in/Selection List/Provisional Selection List ರಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಆಯ್ಕೆಪಟ್ಟಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು –560 001 ಇವರಿಗೆ ಸಲ್ಲಿಸಬಹುದು. ನಿಗದಿತ ದಿನಾಂಕದ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಆಯೋಗದ ಪ್ರಕಟಣೆ ತಿಳಿಸಿದೆ.

ಪಲ್ಲವಿ/ಕೆಎಂ

## ಈ ವಾರದ ಬೆಳ್ಳಿಸಿನಿಮಾ–ಬೆಳ್ಳಿಮಾತು: “ ಎದೆಗಾರಿಕೆ ” ಚಲನಚಿತ್ರ ಪ್ರದರ್ಶನ, ಸಂವಾದ

ಬೆಂಗಳೂರು ಡಿಸೆಂಬರ್ 3 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ–ಬೆಳ್ಳಿಮಾತು ಕಾರ್ಯಕ್ರಮದಡಿ ಡಿಸೆಂಬರ್ 5 ರ ಶನಿವಾರದಂದು ಬೆಳ್ಳಿ ಸಿನಿಮಾ “ ಎದೆಗಾರಿಕೆ ” ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಿದೆ. ಈ ಚಿತ್ರದ ನಿರ್ದೇಶಕ ಡಿ. ಸುಮನ್ ಕಿತ್ತೂರು ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಡಿಸೆಂಬರ್ 5 ರಂದು ಸಂಜೆ 4–00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ಚಲನಚಿತ್ರ ನಟರಾದ ಅದಿತ್ಯ, ಧರ್ಮ ಹಾಗು ನಿರ್ಮಾಪಕ ಎಂ.ಎಸ್. ರವೀಂದ್ರ ಅವರು ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಜಿಪಿಆರ್

## ಸೂರ್ಯಮಿತ್ರ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮ ಉದ್ಘಾಟನಾ ಸಮಾರಂಭ

ಬೆಂಗಳೂರು, ಡಿಸೆಂಬರ್ 3 (ಕರ್ನಾಟಕ ವಾರ್ತೆ)

ಕರ್ನಾಟಕ ಹಾಗೂ ಕೇಂದ್ರ ಸರ್ಕಾರದ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ಸಂಸ್ಥೆಯ ಆಶ್ರಯದಲ್ಲಿ ಸೂರ್ಯಮಿತ್ರ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮದ ಉದ್ಘಾಟನಾ ಸಮಾರಂಭವನ್ನು ಏರ್ಪಡಿಸಲಾಗಿದೆ. ಈ

ತರಬೇತಿಯಲ್ಲಿ 90 ಆಯ್ದ ಅಭ್ಯರ್ಥಿಗಳು ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದ ಉದ್ಘಾಟನಾ ಸಮಾರಂಭವು ಡಿಸೆಂಬರ್ 4 ರಂದು ಬೆಳಿಗ್ಗೆ 10–00 ಗಂಟೆಗೆ ಜಕ್ಕೂರಿನಲ್ಲಿರುವ ಬೆಂಗಳೂರಿನ ಮಹಾತ್ಮಾಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ ಸಭಾಂಗಣದಲ್ಲಿ ನಡೆಯಲಿದೆ.

ಮುಖ್ಯ ಅತಿಥಿಯಾಗಿ, ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಹಾಗೂ, ಮಹಾತ್ಮಗಾಂಧಿ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ಪುನಟಿ ಶ್ರೀಧರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಪರ ಪ್ರಧಾನ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರಾದ ಲತಾಕೃಷ್ಣ ರಾವ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಪ್ರಧಾನ ಕಾರ್ಯದರ್ಶಿಗಳಾದ ಸುಭಾಸ್‌ಚಂದ್ರ ಅವರು ಪಾಲ್ಗೊಳ್ಳುವರು.

ಪಲ್ಲವಿ:ಬಾಬು:ಜಿಪಿಅರ್

# ಸಾರ್ವಜನಿಕ ಅಭಿಪ್ರಾಯ ಆಹ್ವಾನ

ಬೆಂಗಳೂರು, ಡಿಸೆಂಬರ್ 3 (ಕರ್ನಾಟಕ ವಾರ್ತೆ)

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು, ಕರ್ನಾಟಕದಲ್ಲಿ ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ರಾಜ್ಯ ಮಕ್ಕಳ ಸುರಕ್ಷತಾ ನೀತಿ– 2015 ರ ಕರಡನ್ನು ಸಿದ್ಧಪಡಿಸಿದೆ. ಈ ಕರಡು ನೀತಿಯು ಇಲಾಖೆಯ ವೆಬ್‌ಸೈಟ್ dwcdkar.gov.in ನಲ್ಲಿ ಲಭ್ಯವಿದ್ದು, ಇದರಲ್ಲಿ ಹೆಚ್ಚಿನ ಸೇರ್ಪಡೆ/ಮಾರ್ಪಾಡು ಹಾಗೂ ತೆಗೆದು ಹಾಕುವಂತಹ ಅಂಶಗಳು ಇದ್ದಲ್ಲಿ, ಸಾರ್ವಜನಿಕರು ತಮ್ಮ ಸಲಹೆ ಹಾಗೂ ಅಭಿಪ್ರಾಯಗಳನ್ನು ksicpskarnataka@gmail.com ಗೆ ದಿನಾಂಕ: 15–12–2015 ರೊಳಗೆ ಕಳುಹಿಸಿಕೊಡಲು ಕೋರಲಾಗಿದೆ.

ಪಲ್ಲವಿ/ಕೆಎಂ

# Public Opinion sought

**Bangalore, December 3 (Karnataka Information)**

**Department of Women and Child Development has drafted the State Child Protection Policy for Educational Institutions in Karnataka -2015. The draft Policy is available on the department website dwcdkar.gov.in**

**Public are requested to send their opinions regarding any additions, modifications or deletions in the draft policy by email to ksicpskarnataka@gmail.com**

**pallavi/km**